**ಕರ್ನಾಟಕ ವಿಧಾನಪರಿಷತ್ತು**

| | | | |
|---|---|---|---|
| 1. | **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | : | **775** |
| 2. | ಮಾನ್ಯ ಸದಸ್ಯರ ಹೆಸರು | : | ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| 3. | ಉತ್ತರಿಸಬೇಕಾದ ದಿನಾಂಕ | : | 21.08.2026 |
| 4. | ಉತ್ತರಿಸುವ ಸಚಿವರು | : | ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದ ವೈದ್ಯಕೀಯ ಇಲಾಖೆಯ ನೌಕರರಿಗೆ ಸಿ & ಆರ್ ನಿಯಮಗಳನ್ನು ತರುವ ಪ್ರಕ್ರಿಯೆ ಪ್ರಾರಂಭವಾಗಿದೆಯೇ; ಹಾಗಿದ್ದಲ್ಲಿ, ಅದು ಯಾವ ಹಂತದಲ್ಲಿದೆ ಮತ್ತು ಅದನ್ನು ಯಾವ ವರ್ಷದಿಂದ ಜಾರಿ ಮಾಡುವ ಯೋಜನೆ ಸರ್ಕಾರ ಹೊಂದಿದೆ; | ಹೌದು.<br>ವೈದ್ಯಕೀಯ ಶಿಕ್ಷಣ ಇಲಾಖೆಗೆ ಸಂಬಂಧಿಸಿದಂತೆ AICTE ವೇತನ ಶ್ರೇಣಿಯ ಬೋಧಕ ಹುದ್ದೆಗಳು ಹಾಗೂ ರಾಜ್ಯ ವೇತನ ಶ್ರೇಣಿಯ ಬೋಧಕ ಹಾಗೂ ಬೋಧಕೇತರ ಹುದ್ದೆಗಳ ಏಕರೂಪದ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಈಗಾಗಲೇ ಈ ಕೆಳಕಂಡ 20 ಸ್ವಾಯತ್ತ ವೈದ್ಯಕೀಯ ಸಂಸ್ಥೆಗಳ ಆಡಳಿತ ಮಂಡಳಿ ಸಭೆಯ ಅನುಮೋದನೆಯೊಂದಿಗೆ ಅಳವಡಿಸಿಕೊಳ್ಳಲಾಗಿರುತ್ತದೆ.<br>1. ಚಾಮರಾಜನಗರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಾಮರಾಜನಗರ.<br>2. ಗುಲಬರ್ಗಾ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಲಬುರಗಿ.<br>3. ಕೊಡಗು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕೊಡಗು.<br>4. ಶಿವಮೊಗ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಶಿವಮೊಗ್ಗ.<br>5. ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಕಾರವಾರ.<br>6. ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಮತ್ತು ರಾಜೀವ್ ಗಾಂಧಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ, ರಾಯಚೂರು.<br>7. ಹಾವೇರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾವೇರಿ.<br>8. ಚಿಕ್ಕಮಗಳೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಚಿಕ್ಕಮಗಳೂರು.<br>9. ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಹಾಸನ.<br>10. ನಂದಿ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಚಿಕ್ಕಬಳ್ಳಾಪುರ.<br>11. ಚಿತ್ರದುರ್ಗ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಚಿತ್ರದುರ್ಗ.<br>12. ಯಾದಗಿರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಯಾದಗಿರಿ.<br>13. ಇಂದಿರಾಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆ, ಬೆಂಗಳೂರು,<br>14. ಸಂಜಯ್ ಗಾಂಧಿ ಆಸ್ಪತ್ರೆ, ಬೆಂಗಳೂರು,<br>15. ಕರ್ನಾಟಕ ಎಂಡೋಕ್ರೈನಾಲಜಿ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು.<br>16. ಗ್ಯಾಸ್ಟ್ರೋ ಎಂಟ್ರಾಲಾಜಿ ಸಂಸ್ಥೆ, ಬೆಂಗಳೂರು,<br>17. ಶ್ರೀ ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು,<br>18. ನೆಫ್ರೋ ಯುರಾಲಜಿ ಸಂಸ್ಥೆ, ಬೆಂಗಳೂರು,<br>19. ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮೈಸೂರು.<br>20. ಬೀದರ್ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೀದರ್. |

| | | |
|---|---|---|
| | | ಸದರಿ ಸಂಸ್ಥೆಗಳಲ್ಲದೇ, ದಿನಾಂಕ: 18.08.2026 ರಂದು ನಡೆದ ಸಾಮಾನ್ಯ ಆಡಳಿತ ಮಂಡಳಿ ಸಭೆಯಲ್ಲಿ ಮಂಡ್ಯ ವೈದ್ಯಕೀಯ ವಿಜ್ಞಾನಗ ಳ ಸಂಸ್ಥೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೂ ಅನುಮೋದನೆ ನೀಡಲಾಗಿರುತ್ತದೆ.<br><br>ಉಳಿದ ಸಂಸ್ಥೆಗಳಾದ (1) ಕೆಎಂಸಿಆರ್‌ಐ, ಹುಬ್ಬಳ್ಳಿ, (2) ಡಿಮ್ಹಾನ್ಸ್ ಧಾರವಾಡ, (3) ಜಿಮ್ಸ್, ಗದಗ, (4) ಬಿಎಂಸಿಆರ್‌ಸಿ, ಬಳ್ಳಾರಿ, (5) ಕಿಮ್ಸ್, ಕೊಪ್ಪಳ, (6) ಜಯದೇವ ಹೃದಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು, (7) ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು, (8) ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆ, ಬೆಂಗಳೂರು, (9) ಎಸ್‌ಡಿಎಸ್ ಟಿಆರ್‌ಸಿ ಮತ್ತು ರಾಜೀವ್ ಗಾಂಧಿ ಎದೆರೋಗಗಳ ಸಂಸ್ಥೆ, ಬೆಂಗಳೂರು, 10) ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಬೆಳಗಾವಿ, (11) ಸರ್ಕಾರಿ ದಂತ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಮತ್ತು (12) ಸರ್ಕಾರಿ ದಂತ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬಳ್ಳಾರಿ ಈ ಸಂಸ್ಥೆಗಳ ವೃಂದ ಮತ್ತು ನೇಮಕಾತಿ ನಿಯಮಗಳು ಅಂತಿಮಗೊಳ್ಳುವ ಹಂತದಲ್ಲಿರುತ್ತದೆ. ಈ ಸಂಸ್ಥೆಗಳಿಗೂ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಜಾರಿಗೆ ತರಲು ಕ್ರಮವಹಿಸಲಾಗುತ್ತಿದೆ. |
| ಆ) | ರಾಜ್ಯದ ಸ್ವಾಯತ್ತ ವೈದ್ಯಕೀಯ ಕಾಲೇಜುಗಳು ಮತ್ತು ಸಂಸ್ಥೆಗಳಲ್ಲಿ ಖಾಯಂ ನೇಮಕಾತಿ ಹೊಂದಿದ ನೌಕರರಿಗೆ ಕೆಜಿಐಡಿ ಸೌಲಭ್ಯ ಒದಗಿಸದೇ ಇರುವುದು ನಿಜವೇ; ಹಾಗಿದ್ದಲ್ಲಿ ಇದಕ್ಕೆ ಕಾರಣವೇನು? (ವಿವರ ನೀಡುವುದು) | ಹೌದು.<br><br>ವೈದ್ಯಕೀಯ ಶಿಕ್ಷಣ ಇಲಾಖೆ ಅಧೀನದ ವೈದ್ಯಕೀಯ ಕಾಲೇಜು ಮತ್ತು ಸಂಸ್ಥೆಗಳು ಸ್ವಾಯುತ್ತ ಸಂಸ್ಥೆಗಳಾಗಿರುವ ಕಾರಣ, ಸದರಿ ಸಂಸ್ಥೆಗಳಲ್ಲಿನ ನೌಕರರು ಸ್ವಾಯತ್ತ ಸಂಸ್ಥೆಗಳ ನೌಕರರಾಗಿರುತ್ತಾರೆಯೇ ಹೊರತು "ಸರ್ಕಾರಿ ನೌಕರರು" ಎಂಬ ಪದದ ವ್ಯಾಪ್ತಿಯಲ್ಲಿ ಬರುವುದಿಲ್ಲ. ಆದರೆ, ಕೆಜಿಐಡಿ ಸೌಲಭ್ಯವು ಕೇವಲ ಸರ್ಕಾರಿ ನೌಕರರಿಗೆ ಒದಗಿಸಲಾದ ಸೌಲಭ್ಯವಾಗಿರುವ ಕಾರಣ, ಸದರಿ ಸೌಲಭ್ಯವನ್ನು ಸ್ವಾಯತ್ತ ವೈದ್ಯಕೀಯ ಸಂಸ್ಥೆಗಳ ಮತ್ತು ಕಾಲೇಜುಗಳ ನೌಕರರಿಗೆ ಒದಗಿಸಿರುವುದಿಲ್ಲ. |

**ಸಂಖ್ಯೆ:** ಎಂಇಡಿ 510 ಎಂಪಿಎಸ್ 2026

**(ಡಾ. ಶರಣಪ್ರಕಾಶ ಆರ್. ಪಾಟೀಲ್)**
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು